ಸರ್ಕಾರದ ಆದೇಶಗಳ ಪಾಲನೆ

750 - ಶ್ರೀ ಬಸವರಾಜ ಮಂಡಿಮಠ್ ಜಿ. (ಚಳ್ಳಕೆರೆ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಸಾರ್ವಜನಿಕ ಹಿತಾಸಕ್ತಿಯ ವಿಷಯಗಳ ಬಗೆಗಿನ ಶಾಸಕ ಮನವಿ ಪತ್ರಗಳಿಗೆ ಸಮರ್ಪಕ ಉತ್ತರಗಳನ್ನು ನೀಡುವ ಬಗ್ಗೆ ಆದೇಶಗಳೇನಾದರೂ ನೀಡಲಾಗಿದೆಯೇ, ಹಾಗಿದ್ದಲ್ಲಿ ಅದು ಪಾಲನೆ ಆಗುತ್ತಿದೆಯೇ?*

ಆ) *ಪಾಲನೆ ಮಾಡದವರ ಅಧಿಕಾರಿ ವಿರುದ್ಧ ಯಾವ ಕ್ರಮ ತೆಗೆದುಕೊಳ್ಳಲಾಗಿದೆ?*

ಇ) *ವಿಶೇಷವಾಗಿ ಕಂದಾಯ, ಆಹಾರ ಮತ್ತು ನಾಗರೀಕ ಪೂರೈಕೆ, ಗ್ರಾಮೀಣಾಭಿವೃದ್ಧಿ ಇಲಾಖೆಗಳ ಅಡಳಿತ ವರ್ಗವು ಉದ್ದೇಶ ಪೂರ್ವಕವಾಗಿ ಉತ್ತರ ನೀಡಲು ಧಿಕ್ಕರಿಸುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದರೆ ಯಾವ ಕ್ರಮ ಕೈಗೊಳ್ಳಲಾಗಿದೆ?*

ಶ್ರೀ ಎಸ್. ಎಂ. ಕೃಷ್ಣ (ಮುಖ್ಯಮಂತ್ರಿಗಳು) :

ಅ) ಹೌದು.

ಆ) ನಿರ್ದಿಷ್ಟ ಪ್ರಕರಣವನ್ನು ಸರ್ಕಾರದ ಗಮನಕ್ಕೆ ತಂದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು.

ಇ) ಇಲ್ಲ.

ಸೇಡಂ ತಾಲ್ಲೂಕಿನ ವಿದ್ಯುತ್ ಮಂಡಳಿ ಕಛೇರಿಯಲ್ಲಿ ಅವ್ಯವಹಾರ

754 - ಶ್ರೀ ಬಸವಂತರೆಡ್ಡಿ ಮೊತಕಪಲ್ಲಿ (ಸೇಡಂ) : ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಗುಲ್ಬರ್ಗಾ ಜಿಲ್ಲೆಯ ಸೇಡಂ ತಾಲ್ಲೂಕಿನ ವಿದ್ಯುಚ್ಛಕ್ತಿ ಮಂಡಳಿ ಕಛೇರಿಯಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?*

ಇ) *ಆಂಧ್ರ ಗಡಿ ಪ್ರಾಂತ್ಯ ಭಾಗದಲ್ಲಿಯ ಗ್ರಾಮಗಳಿಗೆ ವಿದ್ಯುತ್ ಕಂಬಗಳು, ತಂತಿ, ಟಿ.ಸಿ. ಇತ್ಯಾದಿ ಸಾಮಗ್ರಿಗಳನ್ನು ಕಳ್ಳಸಾಗಣೆಯಾಗುವುದು ನಿಜವಲ್ಲವೇ?*

ಈ) *ತಪ್ಪಿತಸ್ಥ ಅಧಿಕಾರಿಯ ವಿರುದ್ಧ ಸರ್ಕಾರ ಕೈಗೊಂಡ ಕ್ರಮವೇನು?*

ಶ್ರೀ ವೀರಕುಮಾರ ಪಾಟೀಲ್ (ಇಂಧನ ರಾಜ್ಯ ಸಚಿವರು) :

ಅ) ಗುಲ್ಬರ್ಗಾ ಜಿಲ್ಲೆಯ ಸೇಡಂ ತಾಲ್ಲೂಕಿನ ವಿದ್ಯುಚ್ಛಕ್ತಿ ಮಂಡಳಿ ಕಛೇರಿಯಲ್ಲಿ ನಡೆದಿರಬಹುದಾದ ಅವ್ಯವಹಾರದ ನಿರ್ದಿಷ್ಟ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.